# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1074
2) ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸಬೇಕಾದ ದಿನಾಂಕ : 28-12-2022
4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮತ್ಸ್ಯಾಶ್ರಯ 'ಯೋಜನೆಯಡಿಯಲ್ಲಿ ಮನೆ ಪಡೆಯಲು ಇರುವ ಮಾನದಂಡಗಳೇನು; (ವಿವರ ಮತ್ತು ಸುತ್ತೋಲೆಗಳ ಪ್ರತಿ ನೀಡುವುದು) | ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮನೆ ಪಡೆಯಲು ಇರುವ ಮಾನದಂಡಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಆ) | ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮನೆ ಹಂಚಿಕೆಯ ಅಧಿಕಾರ ಯಾರಿಗೆ ನೀಡಲಾಗಿದೆ; ಸದರಿ ಮನೆ ಹಂಚಿಕೆ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು ಯಾರ್ಯಾರು;( ವಿವರ ನೀಡುವುದು) | ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳ ಹಂಚಿಕೆಯನ್ನು ಮಾನ್ಯ ವಿಧಾನಸಭೆ ಸದಸ್ಯರ ಅಧ್ಯಕ್ಷತೆಯಲ್ಲಿ ಮತ್ತು ವಿಧಾನ ಪರಿಷತ್ತಿನ ಸದಸ್ಯರ ಸಹ ಅಧ್ಯಕ್ಷತೆಯಲ್ಲಿ ಸೆಚಿಸಲಾಗಿರುವ ಸಮಿತಿಯಲ್ಲಿ ಆಯ್ಕೆ ಮಾಡಲಾಗುವುದು. ವಿವರವನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |
| ಇ) | ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರನ್ನು ಸದರಿ ಮನೆ ಹಂಚಿಕೆ ಸಮಿತಿಗೆ ಸದಸ್ಯರನ್ನಾಗಿ ಮಾಡಲು ಕ್ರಮವಹಿಲಾಗುವುದೇ; ಈ ಬಗ್ಗೆ ಸರ್ಕಾರದ ನಿಲುವೇನು; (ವಿವರ ನೀಡುವುದು) | ಮತ್ಸ್ಯಾಶ್ರಯ ಯೋಜನೆಯಡಿ ಹಂಚಿಕೆ ಮಾಡಲಾದ ಮನೆಗಳಿಗೆ ವಿಧಾನಸಭಾ ಕ್ಷೇತ್ರವಾರು ಫಲಾನುಭವಿಗಳನ್ನು ಆಯ್ಕೆ ಮಾಡಲು ವಿಧಾನ ಪರಿಷತ್ತು ಸದಸ್ಯರನ್ನು ಸಹ ಅಧ್ಯಕ್ಷರನ್ನಾಗಿ ನೇಮಿಸಿ ಸರ್ಕಾರದಿಂದ ಈಗಾಗಲೇ ಆದೇಶ ಹೊರಡಿಸಲಾಗಿರುತ್ತದೆ. ಸರ್ಕಾರದ ಆದೇಶದ ಪ್ರತಿಯನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |
| ಈ) | ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಹಂಚಿಕೆಯಾದ ಮನೆಗಳೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹಂಚಿಕೆಯಾದ ಮನೆಗಳ ಸಂಖ್ಯೆ ಮತ್ತು ಅನುದಾನವೆಷ್ಟು? (ವಿವರ ನೀಡುವುದು) | 2022-23 ನೇ ಸಾಲಿನಲ್ಲಿ ಒಟ್ಟು 5000 ಮನೆಗಳು ಮಂಜೂರಾಗಿದ್ದು, 4053 ಮನೆಗಳನ್ನು ವಿವಿಧ ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಲಾಗಿರುತ್ತದೆ. ಸದರಿ ಯೋಜನೆಗೆ ಇಲ್ಲಿಯವರೆಗೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. ಉಡುಪಿ ಜಿಲ್ಲೆಗೆ 2022-23ನೇ ಸಾಲಿನ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ 620 ಮನೆಗಳನ್ನು ಮತ್ತು ದಕ್ಷಿಣ ಕನ್ನಡ ಜಿಲ್ಲೆಗೆ 270 ಮನೆಗಳನ್ನು ಹಂಚಿಕೆ ಮಾಡಲಾಗಿರುತ್ತದೆ. |

ಸಂಖ್ಯೆ: ಪಸಂಮೀ ಇ-284 ಮೀಇಯೋ 2022

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

# ಅನುಬಂಧ-01

## ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಇರುವ ಮಾನದಂಡಗಳು

ಮತ್ಸ್ಯಾಶ್ರಯ ಯೋಜನೆಯಡಿ ವಸತಿ ಸೌಲಭ್ಯವನ್ನು ಪಡೆಯುವ ಫಲಾನುಭವಿಯು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರತಕ್ಕದ್ದು.

**ಅರ್ಹತೆಗಳು:-**

1) ಫಲಾನುಭವಿಯು ಹುಟ್ಟು : ವೃತ್ತಿಯಲ್ಲಿ ಮೀನುಗಾರನಾಗಿರಬೇಕು. ಮೀನುಗಾರಿಕೆಗೆ ಪೂರಕವಾದ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಸಹ ಆಯ್ಕೆ ಮಾಡಬಹುದಾಗಿದೆ.
2) ಫಲಾನುಭವಿಯು ವಿವಾಹಿತನಾಗಿರಬೇಕು.
3) ಫಲಾನುಭವಿ ಸ್ವಂತ ನಿವೇಶನ ಹೊಂದಿರತಕ್ಕದ್ದು.
4) ಫಲಾನುಭವಿಯು ಸ್ಥಳೀಯ ಮೀನುಗಾರರ ಸಹಕಾರ ಸಂಘದ ಸದಸ್ಯನಾಗಿಗಬೇಕು, ಇಲ್ಲದಿದ್ದಲ್ಲಿ ಕಳೆದ ಮೂರು ವರ್ಷಗಳಿಂದ ಮೀನುಗಾರಿಕೆಯಲ್ಲಿ ತೊಡಗಿರುವ ಬಗ್ಗೆ ಸಂಬಂಧಿಸಿದ ಮೀನುಗಾರಿಕೆ ಸಹಾಯಕ ನಿರ್ದೇಶಕರು ದೃಢೀಕರಿಸಬೇಕು.
5) ಫಲಾನಿಭವಿಯು ಸರ್ಕಾರದ ಇತರ ವಸತಿ ಯೋಜನೆಯಡಿ ಸೌಲಭ್ಯವನ್ನು ಪಡೆದಿರಬಾರದು ಈ ಬಗ್ಗೆ ಸಂಬಂಧಪಟ್ಟ ಗ್ರಾಮ ಪಂಚಾಯತಿ, ಮುನಿಸಿ ಪಾಲಿಟಿ, ನಗರಸಭೆ ಮುಂತಾದ ಸಂಸ್ಥೆಗಳಿಂದ ದೃಢೀಕರಣ ಹೊಂದಿರತಕ್ಕದ್ದು.
6) ಫಲಾನುಭವಿಯು ಆರ್ಥಿಕವಾಗಿ ಹಿಂದುಳಿದವರಾಗಿರತಕ್ಕದ್ದು.

ಅನುಬಂಧ - 2

3

# ಕರ್ನಾಟಕ ಸರ್ಕಾರ

ಸಂಖ್ಯೆ:ಪಸಂಮೀ ಇ-275 ಮೀಇಯೋ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 04-10-2021

## ತಿದ್ದುಪಡಿ

ಆದೇಶ ಸಂಖ್ಯೆ: ಪಸಂಮೀ/112/ಮೀಇಯೋ/2007, ದಿನಾಂಕ: 31-07-2008 ರ ಆದೇಶ ಭಾಗದಲ್ಲಿ ಹಾಲಿ ಇರುವ ಆಯ್ಕೆ ಸಮಿತಿಯನ್ನು ಕೆಳಕಂಡಂತೆ ಅದರ ಮುಂದೆ ನಮೂದಿಸಿರುವಂತೆ ತಿದ್ದಿ ಓದಿಕೊಳ್ಳತಕ್ಕದ್ದು.

| ಹಾಲಿ ಇರುವ ಆಯ್ಕೆ ಸಮಿತಿ | ತಿದ್ದುಪಡಿಗೊಳಿಸಲಾದ ಆಯ್ಕೆ ಸಮಿತಿ |
|---|---|
| ಅಧ್ಯಕ್ಷರು, ಆಯಾ ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು: ಆಯಾ ವಿಧಾನಸಭಾ ಕ್ಷೇತ್ರದ ಶಾಸಕರು |
| ಸದಸ್ಯರು: ವಿಧಾನ ಪರಿಷತ್ತಿನ ಸದಸ್ಯರು (ಅವರ ವ್ಯಾಪ್ತಿಯ ಅಪೇಕ್ಷಿಸಿದ ಯಾವುದಾದರೊಂದು ವಿಧಾನಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ) | ಸಹ ಅಧ್ಯಕ್ಷರು: ವಿಧಾನ ಪರಿಷತ್ತಿನ ಸದಸ್ಯರು (ಅವರ ವ್ಯಾಪ್ತಿಯ ಅಪೇಕ್ಷಿಸಿದ ಯಾವುದಾದರೊಂದು ವಿಧಾನಸಭಾ ಕ್ಷೇತ್ರಕ್ಕೆ ಸೀಮಿತವಾದಂತೆ) |
| ಸದಸ್ಯ ಕಾರ್ಯದರ್ಶಿ: ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2) | ಸದಸ್ಯ ಕಾರ್ಯದರ್ಶಿ: ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A 4/10/21
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4. ಕರ್ನಾಟಕ ರಾಜ್ಯದ ಎಲ್ಲಾ ವಿಧಾನ ಸಭಾ ಸದಸ್ಯರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5. ಕರ್ನಾಟಕ ರಾಜ್ಯದ ಎಲ್ಲಾ ವಿಧಾನ ಪರಿಷತ್ ಸದಸ್ಯರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6. ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚುವರಿ ಪ್ರತಿಗಳು.